ಸ್ಥಾಪನೆ : 1907

# ದಿ ಬೆಂಗಳೂರು ಸಿಟಿ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್

ಆಡಳಿತ ಕಛೇರಿ, ನಂ. 3, ಪಂಪಮಹಾಕವಿ ರಸ್ತೆ,
ಚಾಮರಾಜಪೇಟೆ, ಬೆಂಗಳೂರು-18

THE BANGALORE CITY CO-OP. BANK LTD. Administrative Office Bangalore

Ref : BCCB/EST/086/2025-26 DATE : 16.08.2025

## ಅರ್ಹ ಅಭ್ಯರ್ಥಿಗಳಿಂದ 'ಕಿರಿಯ ಸಹಾಯಕರು' ಮತ್ತು 'ಅಟೆಂಡರ್' ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸುತ್ತಿದೆ.

| | |
|---|---|
| 1. ಹುದ್ದೆಗಳ ಸಂಖ್ಯೆ : | i) ಕಿರಿಯ ಸಹಾಯಕರು 62 (ಅರವತ್ತೆರಡು)<br>ii) ಅಟೆಂಡರ್ 12 (ಹನ್ನೆರಡು) |
| 2. ವಿದ್ಯಾರ್ಹತೆ : | i) ಕಿರಿಯ ಸಹಾಯಕರ ಹುದ್ದೆಗೆ ಭಾರತದ ಕಾನೂನಿನ ಅಡಿಯಲ್ಲಿ ಸ್ಥಾಪನೆಯಾದ ಯಾವುದೇ ವಿಶ್ವವಿದ್ಯಾನಿಲಯ ಪದವಿಯಲ್ಲಿ ತೇರ್ಗಡೆಯಾಗಿರಬೇಕು.<br>ಅ) ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥ ಮಾಡಿಕೊಳ್ಳಬೇಕು ಮತ್ತು<br>ಆ) ಕಂಪ್ಯೂಟರ್ ಅಪರೇಷನ್ಸ್ ಮತ್ತು ಅಪ್ಲೀಕೇಷನ್‌ನಲ್ಲಿ ಜ್ಞಾನ ಹೊಂದಿರಬೇಕು.<br>ii) ಅಟೆಂಡರ್ ಹುದ್ದೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.<br>(ಸದರಿ ಪರೀಕ್ಷೆಯಲ್ಲಿ ಕನ್ನಡವನ್ನು ಒಂದು ಭಾಷೆಯಾಗಿ ಓದಿರತಕ್ಕದ್ದು) |
| 3. ವಯೋಮಿತಿ : | ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಕನಿಷ್ಠ 18 ವರ್ಷ : ಗರಿಷ್ಠ<br>A) ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗ / ಪ್ರವರ್ಗ-1 ರವರಿಗೆ 40 ವರ್ಷಗಳು<br>B) ಹಿಂದುಳಿದ ಜಾತಿ ಮತ್ತು ಹಿಂದುಳಿದ ವರ್ಗದವರಿಗೆ 38 ವರ್ಷಗಳು<br>C) ಇತರೆ ಅಭ್ಯರ್ಥಿಗಳಿಗೆ 35 ವರ್ಷಗಳು |
| 4, ಅಗತ್ಯ ಅರ್ಹತೆ : | ಅಭ್ಯರ್ಥಿಗಳು ಕರ್ನಾಟಕ ನಿವಾಸಿಗಳಾಗಿದ್ದು, ಕನ್ನಡ ಭಾಷೆ ಬರೆಯಲು ಮತ್ತು ಓದಲು ಬಲ್ಲವರಾಗಿರಬೇಕು. |
| **5. ಅರ್ಜಿ ಸಲ್ಲಿಕೆಯ ವಿಧಾನ ಮತ್ತು ಸಲ್ಲಿಕೆಗೆ ಕೊನೆಯ ದಿನಾಂಕ :** | ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ www.bccbl.co.in ಅನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ **BCCBANK RECRUITMENT 2025** ಎಂದು ಮೂಡುತ್ತದೆ ಮತ್ತು ಅಧಿಸೂಚನೆ / ಪರೀಕ್ಷಾ ಶುಲ್ಕ ವಿವರಗಳು ಲಭ್ಯವಾಗಲಿದ್ದು, ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ವಿವರಗಳನ್ನು ಮತ್ತು ಅರ್ಜಿ ಸಲ್ಲಿಸುವ ಸೂಚನೆಗಳನ್ನು ತಪ್ಪದೇ ಓದಿಕೊಂಡು ಅದರಂತೆ ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 9036072155 ಅನ್ನು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. |

| ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭಿಕ ದಿನಾಂಕ | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ | ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ |
|---|---|---|
| **20.08.2025** | **10.09.2025** | **10.09.2025** |

6. ನಿಗದಿಪಡಿಸಿದ ಅರ್ಜಿ / ಪರೀಕ್ಷಾ ಶುಲ್ಕ : (GST ಒಳಗೊಂಡಂತೆ)

| | ಕಿರಿಯ ಸಹಾಯಕರುಗಳು | ಅಟೆಂಡರ್ |
|---|---|---|
| ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ.750/– | ರೂ.600/– |
| ಇತರರು | ರೂ.1000/– | ರೂ.800/– |
| | | |

**ಅರ್ಜಿ ಶುಲ್ಕ ಪಾವತಿಸುವ ವಿಧಾನ :** Payment using Net Banking, Credit Card, Debit Card ಮತ್ತು UPI ಮುಖಾಂತರ ಅರ್ಜಿ ಶುಲ್ಕ ಮತ್ತು Payment Gateway ಶುಲ್ಕವನ್ನು ಪಾವತಿಸತಕ್ಕದ್ದು. ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 10/09/2025 ರ ರಾತ್ರಿ 11.59 ಒಳಗಾಗಿ ಪಾವತಿಸತಕ್ಕದ್ದು, ಇದನ್ನು ಹೊರತುಪಡಿಸಿ 'ಡಿ.ಡಿ, ಪೋಸ್ಟಲ್ ಆರ್ಡರ್ ಮತ್ತು ಮನಿ ಆರ್ಡರ್ ಗಳನ್ನು ಸ್ವೀಕರಿಸಲಾಗುವುದಿಲ್ಲ ಹಾಗೂ ಅರ್ಜಿ ಶುಲ್ಕವನ್ನು ನಿಗದಿಪಡಿಸಿದ ದಿನಾಂಕ, ಸಮಯದೊಳಗಾಗಿ ಸಲ್ಲಿಸದೆ ಇರುವಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಸೂಚನೆ : ಸಂಸ್ಕರಣಾ ಶುಲ್ಕ (Processing Charges) ಹೆಚ್ಚುವರಿಯಾಗಿ ಪಾವತಿಸಬೇಕು.

| | |
|---|---|
| 7. ಲಿಖಿತ ಪರೀಕ್ಷೆ ಮತ್ತು ಕರೆ ಪತ್ರಗಳು : | ಲಿಖಿತ ಪರೀಕ್ಷೆಗೆ ಹಾಜರಾಗಲು ಬ್ಯಾಂಕು ತೀರ್ಮಾನಿಸಿದ ಮಾನದಂಡದ ಅನುಗುಣವಾಗಿ ಅರ್ಹ ಅಭ್ಯರ್ಥಿಗಳಿಗೆ ಕರೆ ಪತ್ರಗಳನ್ನು ಕಳುಹಿಸಲಾಗುವುದು. ಕಿರಿಯ ಸಹಾಯಕರುಗಳ ಹುದ್ದೆಯ ಅಭ್ಯರ್ಥಿಗಳು ಕನ್ನಡ ಭಾಷೆ, ಸಾಮಾನ್ಯ ಆಂಗ್ಲ ಭಾಷೆ, ಸಾಮಾನ್ಯ ಜ್ಞಾನ, ಸಹಕಾರಿ ವಿಷಯ, ಭಾರತ ಸಂವಿಧಾನ, ಸಮಾಜದ ಯುಕ್ತವಾದ ಚಟುವಟಿಕೆಗಳು ಮತ್ತು ವಸ್ತುನಿಷ್ಠ ವಿಷಯಗಳಿಗೆ ಸಂಬಂಧಪಟ್ಟ ಲಿಖಿತ ಪರೀಕ್ಷೆ ಬರೆಯಬೇಕಾಗಿರುತ್ತದೆ. ಅಟೆಂಡರ್ ಹುದ್ದೆಯ ಅಭ್ಯರ್ಥಿಗಳು ಕನ್ನಡ ಭಾಷೆ ಓದಲು / ಬರೆಯುವುದಕ್ಕೆ /ಸಾಮಾನ್ಯ ಜ್ಞಾನ / ಇತ್ಯಾದಿಗಳಿಗೆ ಸಂಬಂಧಿಸಿದಂತೆ ಪರೀಕ್ಷೆ ಬರೆಯಬೇಕಾಗಿರುತ್ತದೆ. ಪರೀಕ್ಷೆಯಲ್ಲಿನ ಅವರ ಸಾಧನೆಯ ಆಧಾರದ ಮೇಲೆ ಬ್ಯಾಂಕಿನ ಮಾನದಂಡದಂತೆ ಸಂದರ್ಶನ ಪತ್ರವನ್ನು ಕಳುಹಿಸಲಾಗುವುದು. ಪರೀಕ್ಷೆಯಲ್ಲಿ ಮತ್ತು ಸಂದರ್ಶನದಲ್ಲಿ ಅಭ್ಯರ್ಥಿಗಳ ಸಾಧನೆ ಆಧರಿಸಿ ಆಯ್ಕೆ ಮಾಡಲಾಗುವುದು. |
| 8. ವೇತನ ಶ್ರೇಣಿ : | ಕಿರಿಯ ಸಹಾಯಕರು ಹುದ್ದೆ: 61300-1500-64300-1650-74200-1900-85600-2300-99400-2700-112900<br><br>ಅಟೆಂಡರ್ ಹುದ್ದೆ : 44425-1125-47800-1250-52800-1375-58300-1500-64300-1650-74200-1900-83700<br><br>ಆಡಳಿತ ಮಂಡಳಿಯ ತೀರ್ಮಾನದ ರೀತ್ಯಾ ತುಟ್ಟಿ ಭತ್ಯೆ, ನಗರ ಪರಿಹಾರ ಭತ್ಯೆ, ಮನೆ ಬಾಡಿಗೆ ಭತ್ಯೆ ಮತ್ತು ಇತರೆ ಭತ್ಯೆಗಳನ್ನು ನೀಡಲಾಗುವುದು. |

| | |
|---|---|
| 9. ಸಾಮಾನ್ಯ ಸೂಚನೆಗಳು : | A) ಅಂಚೆ ಇಲಾಖೆಯಿಂದ ಅಥವಾ ಇನ್ನಾವುದೇ ರೀತಿಯಲ್ಲಿ ಪತ್ರಗಳು ತಲುಪಲು ತಡವಾದರೆ ಅಥವಾ ತಲುಪದಿದ್ದರೆ ಬ್ಯಾಂಕ್ ಜವಾಬ್ದಾರಿಯಾಗಿರುವುದಿಲ್ಲ.<br>B) ಈಗಾಗಲೇ ಕೆಲಸ ಮಾಡುತ್ತಿರುವ ಅಭ್ಯರ್ಥಿಗಳು ಸಂದರ್ಶನದ ಸಂದರ್ಭದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಂಸ್ಥೆಯಿಂದ (Employer) ನಿರಪೇಕ್ಷಣಾ ಪತ್ರ ಸಲ್ಲಿಸಬೇಕು.<br>C) ಅಭ್ಯರ್ಥಿಗಳು ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕಾಗುತ್ತದೆ.<br>D) ಅಭ್ಯರ್ಥಿಗಳ ಅರ್ಹತೆ, ಲಿಖಿತ ಪರೀಕ್ಷೆ, ಸಂದರ್ಶನ ಅಥವಾ ಅಭ್ಯರ್ಥಿಗಳ ಆಯ್ಕೆಯ ವಿಚಾರದಲ್ಲಿ ಆಡಳಿತ ಮಂಡಳಿಯ ತೀರ್ಮಾನವೇ ಅಂತಿಮ, ಈ ಕುರಿತು ಪತ್ರ ವ್ಯವಹಾರವನ್ನು ಮಾನ್ಯ ಮಾಡುವುದಿಲ್ಲ.<br>E) ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಬ್ಯಾಂಕಿನ ಹಾಲಿ ಇರುವ ಅಥವಾ ಮುಂದೆ ಪ್ರಾರಂಭಿಸುವ ಕರ್ನಾಟಕ ರಾಜ್ಯದ ಯಾವುದೇ ಶಾಖೆ/ಕಛೇರಿಯಲ್ಲಿ ಕೆಲಸ ಮಾಡಲು ಸಿದ್ಧರಿರಬೇಕು. |

(ಪಿ.ಮಂಜುನಾಥ)
ನೇಮಕಾತಿ ಉಪಸಮಿತಿ ಸದಸ್ಯರು ಹಾಗೂ ಪ್ರಧಾನ ವ್ಯವಸ್ಥಾಪಕರು
ದಿ ಬೆಂಗಳೂರು ಸಿಟಿ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್
ಆಡಳಿತ ಕಛೇರಿ, ನಂ. 3, ಪಂಪಮಹಾಕವಿ ರಸ್ತೆ,
ಚಾಮರಾಜಪೇಟೆ, ಬೆಂಗಳೂರು-18